ಸಹಕಾರಿ ಸಂಘಗಳಲ್ಲಿ ರೋಸ್ಟರ್ ಪದ್ಧತಿ ಜಾರಿ ಕುರಿತು

199 - ಶ್ರೀ ಕೆ. ಜಯರಾಮ ಶೆಟ್ಟಿ (ಉಳ್ಳಾಲ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಸಹಕಾರ ಸಂಘಗಳಲ್ಲಿ ರೋಸ್ಟರ್ ಪದ್ಧತಿ ಜಾರಿಯಲ್ಲಿದೆಯೇ?

ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಎಷ್ಟು ಸಹಕಾರಿ ಸಂಘಗಳು ಈ ನಿಯಮಗಳನ್ನು ಜಾರಿಗೊಳಿಸುತ್ತಿವೆ?

ಇ) ರೋಸ್ಟರ್ ಪದ್ಧತಿ ಅನುಸರಿಸದೆ ನೇಮಕಾತಿ ಮಾಡಿದ ಸಹಕಾರಿ ಸಂಘಗಳ ಸಂಖ್ಯೆ ಎಷ್ಟು? ಮತ್ತು ಸರ್ಕಾರ ಈ ಸಂಘಗಳ ಮೇಲೆ ಯಾವ ಕ್ರಮ ಕೈಗೊಳ್ಳುವುದು?

ಶ್ರೀ ಎಸ್.ಎಸ್. ಪಾಟೀಲ್(ಸಹಕಾರ ಸಚಿವರು) :

ಅ) ಹೌದು ಜಾರಿಯಲ್ಲಿದೆ.

ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು 891 ಕಾರ್ಯನಿರತ ಸಹಕಾರ ಸಂಘಗಳಿಗೆ ನೇಮಕಾತಿ ಹಾಗೂ ಪದೋನ್ನತ ಮಾಡುವಾಗ ರೋಸ್ಟರ್ ನಿಯಮವನ್ನು ಕಡ್ಡಾಯವಾಗಿ ಪಾಲಿಸುವ ಬಗ್ಗೆ ನಿರ್ದೇಶನಗಳನ್ನು ಎಲ್ಲಾ ಸಂಘಗಳಿಗೆ ನೀಡಲಾಗಿದೆ.

ಇ) ಇಂತಹ ಒಂದು ಪ್ರಕರಣ ದಕ್ಷಿಣ ಕನ್ನಡ ಜಿಲ್ಲಾಕೇಂದ್ರ ಸಹಕಾರ ಬ್ಯಾಂಕಿನ ಸಿಬ್ಬಂದಿ ಪದೋನ್ನತ ವಿಚಾರದಲ್ಲಿ ಸರ್ಕಾರದ ಗಮನಕ್ಕೆ ಬಂದಿತ್ತು. ಆದರೆ ಮಾನ್ಯ ರಾಜ್ಯ ಉಚ್ಚ ನ್ಯಾಯಾಲಯದಿಂದ ಈ ಬಗ್ಗೆ ತಡೆಯಾಜ್ಞೆ ಇರುವುದರಿಂದ ಯಾವುದೇ ಕ್ರಮ ಕೈಗೊಳ್ಳಲಾಗಿರುವುದಿಲ್ಲ.

ದನಕರುಗಳಿಗೆ ಮೇವು ಪೂರೈಸುವ ಬಗ್ಗೆ

133 - ಶ್ರೀ ವಿ.ಎಸ್. ಕೌಜಲಗಿ (ರಾಣೆಬೆನ್ನೂರು) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಮಳೆ ಇಲ್ಲದೆ ರೈತರು ಕಂಗಾಲಾಗಿರುವ ಹಾಗೂ ಮೇವು ಸಹ ದನಕರುಗಳಿಗಿಲ್ಲದೆ ತೊಂದರೆ ಆಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ರಾಣೇಬೆನ್ನೂರು ತಾಲ್ಲೂಕಿನಲ್ಲಿ ಅತೀ ಅಭಾವವಿದ್ದು ದನಕರುಗಳಿಗೆ ಮೇವು ಇಲ್ಲದೆ ರೈತರು ತೊಂದರೆಗೆ ಒಳಗಾಗಿರುವುದರಿಂದ ಮೇವು ದನಕರುಗಳಿಗೆ ಪೂರೈಕೆ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ, ಕೈಕೊಳ್ಳದಿದ್ದಲ್ಲಿ ಕೂಡಲೇ ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಆರ್.ಎಲ್. ಜಾಲಪ್ಪ (ಕಂದಾಯ ಸಚಿವರು) :

ಅ) ರಾಜ್ಯದ ಕೆಲವು ತಾಲ್ಲೂಕುಗಳಲ್ಲಿ ಕಡಿಮೆ ಮಳೆಯಿಂದಾಗಿ ಕುಡಿಯುವ ನೀರಿನ ತೊಂದರೆ ಉಂಟಾಗಿರುತ್ತದೆ. ಚಿತ್ರದುರ್ಗ ಜಿಲ್ಲೆಯ ಕೆಲವು ಗ್ರಾಮಗಳಲ್ಲಿ ಮೇವಿನ ಅಭಾವ ಇರುವುದನ್ನು ಹೊರತುಪಡಿಸಿ, ರಾಜ್ಯದ ಬೇರೆ ಜಿಲ್ಲೆಗಳಿಂದ ಮೇವಿನ ಅಭಾವದ ಬಗ್ಗೆ ವರದಿ ಬಂದಿರುವುದಿಲ್ಲ.

ಆ) ರಾಣೇಬೆನ್ನೂರು ತಾಲ್ಲೂಕಿನಲ್ಲಿ ಸದ್ಯಕ್ಕೆ ಮೇವಿನ ಸಮಸ್ಯೆ ಇರುವುದಿಲ್ಲ.ಆದಾಗ್ಯೂ ಮುಂಜಾಗ್ರತೆ ಕ್ರಮವಾಗಿ ಸರ್ಕಾರವು ರೂ. 6.00 ಲಕ್ಷಗಳನ್ನು ಈಗಾಗಲೇ ಧಾರವಾಡ ಜಿಲ್ಲೆಗೆ ಒದಗಿಸಿದ್ದು, ಮೇವಿನ ಅಭಾವ ಮುಂದೆ ಕಂಡುಬಂದಲ್ಲಿ ಮೇವು ಸರಬರಾಜಿಗೆ ಕ್ರಮ ಕೈಗೊಳ್ಳಲಾಗುವುದು.